1557(2014) ಶ್ರೀ ಚರಂತಿಮಠ್ ವೀರಣ್ಣ ಚಂದ್ರಶೇಖರಯ್ಯ (ಬಾಗಲಕೋಟೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ಬಾಗಲಕೋಟೆ ಜಿಲ್ಲೆಯಲ್ಲಿ ಎಷ್ಟು ; ಅಗ್ನಿಶಾಮಕ ಠಾಣೆಗಳು ಇವೆ : ಅವುಗಳಿಗೆ ಮಂಜೂರಾದ ಸಿಬ್ಬಂದಿ ವರ್ಗದವರು ಈಗ ಕರ್ತವ್ಯ ನಿರ್ವಹಿಸುತ್ತಿರುವರೇ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಯಾವಾಗ ತುಂಬಲಾಗುವುದು.

ಆ. ಠಾಣೆಗಳಿಗೆ ಸಮರ್ಪಕ ವ್ಯವಸ್ಥೆ ಮತ್ತು ಸೌಲಭ್ಯಗಳುಳ್ಳ ಕಟ್ಟಡ ಮತ್ತು ವಾಹನಗಳನ್ನು ಒದಗಿಸಿಕೊಡಲಾಗಿದೆಯೇ ; ಇಲ್ಲವಾದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ಧರಂಸಿಂಗ್ (ಮುಖ್ಯಮಂತ್ರಿಗಳು) :

ಅ. ಬಾಗಲಕೋಟೆ ಜಿಲ್ಲೆಯ ಜಿಲ್ಲಾ ಕೇಂದ್ರವಾಗಿದ್ದು ಬಾಗಲಕೋಟೆ ಮತ್ತು ಜಮಖಂಡಿಯಲ್ಲಿ ಒಟ್ಟು ಎರಡು ಅಗ್ನಿಶಾಮಕ ಠಾಣೆಗಳು ಕಾರ್ಯ ನಿರ್ವಹಿಸುತ್ತಿವೆ. ಅಲ್ಲದೆ ಹಾಲಿ ಕರ್ತವ್ಯ ನಿರ್ವಹಿಸುತ್ತಿವೆ. ಅಲ್ಲದೆ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ ಈ ಕೆಳಕಂಡಂತಿರುತ್ತದೆ.

	S	A	V
ಬಾಗಲಕೋಟೆ	26	16	10
ಜಮಖಂಡಿ	27	15	12

ಹೊಸ ಠಾಣೆಗಳಿಗೆ ಹಾಲಿ ಇರುವ ಸಿಬ್ಬಂದಿಗಳನ್ನು ನಿಯೋಜನೆ ಮಾಡಿರುವುದರಿಂದ ಸಿಬ್ಬಂದಿ ಹುದ್ದೆಗಳು ಖಾಲಿ ಇರುತ್ತವೆ. ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿದೆ. ಖಾಲಿ ಹುದ್ದೆಗಳನ್ನು ತುಂಬುವ ಅವಶ್ಯಕ್ತೆ ಕಂಡು ಬಂದರೆ ಸಧ್ಯದಲ್ಲೇ ಖಾಲಿ ಹುದ್ದೆಗಳನ್ನು ಭರ್ತಿಮಾಡುವ ಕ್ರಮ ತೆಗೆದುಕೊಳ್ಳಲಾಗುವುದು.

ಆ. ಬಾಗಲ ಕೋಟೆಯಲ್ಲಿ ಲೋಕೋಪಯೋಗಿ ಇಲಾಖೆಯವರು ನೀಡಿರುವ ಅನುದಾನದಿಂದ ಖಾಯಂ ಅಗ್ನಿಶಾಮಕ ಠಾಣೆ ಕಟ್ಟಡ ಹಾಗೂ 10 ವಸತಿ ಗೃಹಗಳನ್ನು ಈಗಾಗಲೇ ಸಿಬ್ಬಂದಿಗಳಿಗೆ ವಂಟನ ಮಾಡಲಾಗಿದೆ.

ಜಮಖಂಡಿ ಪಟ್ಟಣದಲ್ಲಿ 11ನೇ ಹಣಕಾಸು ಆಯೋಗವು ಒದಗಿಸಿರುವ ಅನುದಾನದಿಂದ ಖಾಯಂ ಅಗ್ನಿಶಾಮಕ ಠಾಣೆ ಕಟ್ಟಡವನ್ನು ನಿರ್ಮಿಸಲಾಗುತ್ತಿದೆ. ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಿಸುವ ಬಗ್ಗೆ ಅನುದಾನ ಲಭ್ಯತೆಯ ಆಧಾರದ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು.

1558(2015) ಶ್ರೀ ಚರಂತಿಮಠ್ ವೀರಣ್ಣ ಚಂದ್ರಶೇಖರಯ್ಯ (ಬಾಗಲಕೋಟೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ಬಾಗಲಕೋಟೆ ಜಿಲ್ಲೆಯಲ್ಲಿ ಮೀನುಗಾರಿಕಾ ಇಲಾಖೆ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಲಾಗಿರುವ ಯೋಜನೆಗಳ ವಿವರಗಳೇನು :

ಆ. ಒಳನಾಡು ಮೀನುಗಾರಿಕೆಗೆ ಹೆಚ್ಚು ಅವಕಾಶವಿದ್ದು, ಆ ಕುರಿತಾದ ಪ್ರೋತ್ಸಾಹಕ ಕಾರ್ಯಕ್ರಮಗಳೇನು :